## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೇಂದ್ರ ಪುರಸ್ಕೃತ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ಪ್ರತಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲಾ ಸಂಪನ್ಮೂಲ ಕೇಂದ್ರ ಸ್ಥಾಪನೆಗೆ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯ, ನವದೆಹಲಿ ರವರ ಪತ್ರ ಸಂಖ್ಯೆ:ಕೆ-11011/01/2013-DPE RGPSA (I), (II), (III),(IV),(V) &(VI) ದಿನಾಂಕ: 14-11-2013.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012(ಪಿ-6) ದಿನಾಂಕ:31.12.2013

**ಪ್ರಸ್ತಾವನೆ:**

ಭಾರತ ಸರ್ಕಾರದ ಪಂಚಾಯತ್ - ರಾಜ್ ಮಂತ್ರಾಲಯವು ಹಾಲಿ ರಾಷ್ಟ್ರದಾದ್ಯಂತ ಅನುಷ್ಠಾನಗೊಳಿಸುತ್ತಿರುವ e-PANCHAYAT, ಪಂಚಾಯತ್ ಎಂಪವರ್‌ಮೆಂಟ್ ಅಂಡ್ ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಮ್ (PEAIS), ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ (PMEYSA) ಹಾಗೂ ಬ್ಯಾಕ್‌ವರ್ಡ್ ರೀಜನ್ಸ್ ಗ್ರಾಂಟ್ ಫಂಡ್ (BRGF) ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮರ್ಥ್ಯಾಭಿವೃದ್ಧಿ ಹಾಗು ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ ಪಂಚಾಯತ್ ರಾಜ್ ಸಂಸ್ಥೆಗಳನ್ನು ಹಾಗು ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗು ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ 2012-13ನೇ ಸಾಲಿನಿಂದ ನೂತನ ಯೋಜನೆಯನ್ನು ಕೇಂದ್ರ ಸರ್ಕಾರವು ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆಯನ್ನು ಜಾರಿಗೊಳಿಸಿದೆ. ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಕೇಂದ್ರೀಯ ಕಾರ್ಯಕಾರಿ ಸಮಿತಿಯು (CEC) ಈಗಾಗಲೇ ಅನುಮೋದನೆ ನೀಡಿರುತ್ತದೆ. ಅದರಂತೆ ವರ್ಗೇತರ ಯೋಜನೆ(NON-SCP ಮತ್ತು STP), ವಿಶೇಷ ಘಟಕ-ಯೋಜನೆ (SCP) ಮತ್ತು ವಿಶೇಷ ಗಿರಿಜನ ಯೋಜನೆ (STP) 2013-14ನೇ ಸಾಲಿನ ಅನುಮೋದಿತ ಅನುದಾನದ ಶೇಕಡಾ 50% ಪಾಲನ್ನು ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯಕ್ಕೆ ನೀಡಲು ನಿರ್ಧರಿಸಿ, ಅನುಕ್ರಮವಾಗಿ ರೂ. 20,73,17,874/-; ರೂ.4,13,85,411/- ಮತ್ತು ರೂ.67,62,215/- ಒಟ್ಟಾರೆ ರೂ.25,54,65,500/- ಗಳನ್ನು ಮೇಲೆ ಓದಲಾದ (1)ರ ಪತ್ರಗಳ ಮೂಲಕ ಬಿಡುಗಡೆಗೊಳಿಸಿದೆ.

ವಿಶೇಷ ಘಟಕ ಯೋಜನೆ (SCPSC), ವಿಶೇಷ ಗಿರಿಜನ ಯೋಜನೆ (STSP) ಮತ್ತು ಪರಿಶಿಷ್ಟ ಜಾತಿ ಹಾಗೂ ವರ್ಗೇತರ ಯೋಜನೆ (NON-SCPSC ಮತ್ತು STSP) ಘಟಕಗಳಡಿ ಕರ್ನಾಟಕ ರಾಜ್ಯ ಸರ್ಕಾರವು ಸಹ ಶೇಖಡ 25ರಷ್ಟು ಅನುದಾನವನ್ನು ತನ್ನ ಪಾಲಿನ ವಂತಿಗೆಯಾಗಿ ಒದಗಿಸಬೇಕಾಗಿರುತ್ತದೆ. ಅದಕ್ಕಾಗಿ ಓದಲಾದ(2)ರ ಸರ್ಕಾರದ ಆದೇಶದ ಮೂಲಕ ಶೇಖಡ 25ರಷ್ಟು ರಾಜ್ಯ ಸರ್ಕಾರದ ವಂತಿಗೆ ಮೊತ್ತ ರೂ.6,38,66,375-00ಗಳನ್ನು 2013-14ನೇ ಆರ್ಥಿಕ ಸಾಲಿನಲ್ಲಿ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆ ಅನುದಾನದ ಲೆಕ್ಕಶೀರ್ಷಿಕೆ 2515-00-101-0-31 (ಯೋಜನೆ)ರಡಿ ವೆಚ್ಚ ಭರಿಸಿ ಅನುದಾನವನ್ನು ಒದಗಿಸಲಾಗಿರುತ್ತದೆ.

ಪಂಚಾಯತಿ ರಾಜ್ ವ್ಯವಸ್ಥೆಯು ಸದೃಢ ಹಾಗೂ ಸಬಲೀಕರಣವಾಗಬೇಕಾದರೆ ಚುನಾಯಿತ ಪ್ರತಿನಿಧಿಗಳಿಗೆ ಸ್ಥಳೀಯ ಅವಶ್ಯಕತೆ, ಮೂಲಭೂತ ಸೌಲಭ್ಯ ಮತ್ತು ಅಭಿವೃದ್ಧಿ ವಿಷಯಗಳಿಗೆ ಸಂಬಂಧಿಸಿದಂತೆ ವಿಚಾರಧಾರೆಗಳನ್ನು ವೃದ್ಧಿಸುವುದು ಹಾಗೂ ಸಾಂಸ್ಥಿಕವಾಗಿ ಆಡಳಿತದಲ್ಲಿ ಭಾಗವಹಿಸಲು ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಅತ್ಯವಶ್ಯಕವಾಗಿದೆ. ಸ್ಥಳೀಯವಾಗಿ ತರಬೇತಿ ನೀಡುವ ಹಾಗೂ ಗ್ರಾಮೀಣಾಭಿವೃದ್ಧಿಗೆ ಪೂರಕವಾಗಿರುವ ಸಂಶೋಧನೆಗಳನ್ನು ನಡೆಸುವ ಉದ್ದೇಶದಿಂದ ಪ್ರತಿ ಜಿಲ್ಲಾ ಪಂಚಾಯತಿ ಕೇಂದ್ರದಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರವನ್ನು "ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆ"ಯಡಿ ಸ್ಥಾಪಿಸಲು ಉದ್ದೇಶಿಸಲಾಗಿದೆ. ಈ ಉದ್ದೇಶಕ್ಕಾಗಿ 2013-14ನೇ ಸಾಲಿನಲ್ಲಿ ಈ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಒಂದನೇಯ ಕಂತಿನಲ್ಲಿ ಬಿಡುಗಡೆಯಾಗಿದ್ದ ಅನುದಾನ ಹಾಗೂ ರಾಜ್ಯದ ವಂತಿಗೆಯ ಒಟ್ಟಾರೆ ಮೊತ್ತದಲ್ಲಿ ಈಗ ಲಭ್ಯವಿರುವ 6,12,40,536/- ರೂಪಾಯಿಗಳ ಅನುದಾನದಲ್ಲಿ ಭರಿಸಲು ಉದ್ದೇಶಿಸಿದೆ. ಅದಕ್ಕಾಗಿ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012, ಬೆಂಗಳೂರು, ದಿನಾಂಕ: 26-02-2014.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, "ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆಯಡಿ "ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳ ಸಾಮರ್ಥ್ಯಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವ್ಯವಸ್ಥೆಯ ಅನುಷ್ಠಾನಾಧಿಕಾರಿಗಳಿಗೆ ಪುನಶ್ಚೇತನ ತರಬೇತಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ವ್ಯವಸ್ಥೆಯ ಸದೃಢೀಕರಣ ಸಂಬಂಧದ ಕಾರ್ಯಾಗಾರ ಮತ್ತು ಸಂಪರ್ಕ ಸಭೆಗಳನ್ನು ನಡೆಸಲು ಕೆಳಕಂಡ ಜಿಲ್ಲಾ ಪಂಚಾಯತಿ ಕೇಂದ್ರದ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರವನ್ನು ನಿರ್ಮಿಸಲು ಕರ್ನಾಟಕ ಸರ್ಕಾರ ಸ್ವಾಮ್ಯದ "ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ" ರವರಿಗೆ ಮೊದಲನೇಯ ಕಂತಿನ ಬಾಬ್ತಾಗಿ ಈ ಕೆಳಕಂಡ 12 ಜಿಲ್ಲಾ ಪಂಚಾಯತಿಗಳಿಗೆ ಮೊದಲನೆಯ ಕಂತಾಗಿ ತಲಾ ರೂ.50.00 ಲಕ್ಷಗಳಂತೆ ಒಟ್ಟು ರೂ.6.00(ಆರು ಕೋಟಿ ರೂಪಾಯಿಗಳು ಮಾತ್ರ) ಕೋಟಿಗಳನ್ನು- ಬೆಂಗಳೂರಿನ ಇಂದಿರಾನಗರದ ದೇನಾ ಬ್ಯಾಂಕ್ ಶಾಖೆಯಲ್ಲಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ "ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆಯ ಹೆಸರಿನಲ್ಲಿರುವ ಉಳಿತಾಯ ಖಾತೆ ಸಂಖ್ಯೆ 052110026480 ಯಿಂದ ಅನುದಾನವನ್ನು ಬಿಡುಗಡೆಗೊಳಿಸಲು ಆದೇಶಿಸಿದೆ. ಈ ಅನುದಾನವನ್ನು ಕಾರ್ಪೋರೇಶನ್ ಬ್ಯಾಂಕ್, ಎಸ್.ಸಿ. ರಸ್ತೆ ಶಾಖೆಯಲ್ಲಿನ ಖಾತೆ ಸಂಖ್ಯೆ 014401601000499 (IFSC Code CORP0000144)ಗೆ ವರ್ಗಾಯಿಸುವುದು.

ಜಿಲ್ಲಾ ಸಂಪನ್ಮೂಲ ಕೇಂದ್ರಗಳನ್ನು ನಿರ್ಮಿಸಬೇಕಾದ ಜಿಲ್ಲೆಗಳ ವಿವರ ಈ ಕೆಳಕಂಡಂತಿವೆ:

1. ಗದಗ 2. ಕಾರವಾರ (ಉತ್ತರಕನ್ನಡ) 3. ಚಾಮರಾಜನಗರ 4. ಶಿವಮೊಗ್ಗ 5.ಬಾಗಲಕೋಟೆ 6. ಮೈಸೂರು 7. ದಾವಣಗೆರೆ 8. ವಿಜಾಪುರ 9. ಚಿತ್ರದುರ್ಗ 10.ಬೆಂಗಳೂರು ನಗರ 11.ಉಡುಪಿ 12.ಕೋಲಾರ

**ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.**

1. ಅನುದಾನವನ್ನು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಲಾಗಿದೆಯೋ, ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.

2. ಕಟ್ಟಡದ ವಾಸ್ತು ವಿನ್ಯಾಸವನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮವು ಸಿದ್ಧಪಡಿಸಿರುವ ಮಾದರಿಯಲ್ಲಿರಬೇಕು.

3. ಕಾಲಮಿತಿಯಲ್ಲಿ ಕಟ್ಟಡವನ್ನು ನಿರ್ಮಿಸಬೇಕು.

3. Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.

4. ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯ ಕೇಂದ್ರ ಸರ್ಕಾರ ಪ್ರಾಯೋಜಿತ ತೃತೀಯ ಮಧ್ಯವರ್ತಿ(Third Party Evaluation)ಗಳಿಂದ ಎಲ್ಲಾ ತರಬೇತಿ ಕಾರ್ಯಕ್ರಮಗಳನ್ನು ಪರಿವೀಕ್ಷಿಸಲು ಹಾಗೂ ಮೌಲ್ಯಮಾಪನ ಮಾಡಲು ಈ ಆರ್ಥಿಕ ವರ್ಷದ ಅಂತ್ಯದಲ್ಲಿ ಆಗಮಿಸುವರು.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/01/ಟಿಎಫ್‌ಪಿ/2013, ದಿನಾಂಕ: 10-05-2013ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಎಂ.ಜುಲ್ಫಿಕರುಲ್ಲಾ)
ನಿರ್ದೇಶಕರು (ಪಂ.ರಾಜ್-2)
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1.ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
2.ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
3.ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಗದಗ, ಕಾರವಾರ(ಉತ್ತರಕನ್ನಡ), ಚಾಮರಾಜನಗರ, ಶಿವಮೊಗ್ಗ, ಬಾಗಲಕೋಟೆ, ಕೊಡಗು, ದಾವಣಗೆರೆ, ವಿಜಾಪುರ, ಚಿತ್ರದುರ್ಗ, ಬೆಂಗಳೂರು ನಗರ, ಉಡುಪಿ, ಕೋಲಾರ
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
6.ಇಲಾಖಾ ವೆಬ್‌ಸೈಟ್ / ಕರ್ನಾಟಕ ವಿಕಾಸ ಮಾಸ ಪತ್ರಿಕೆ.
7.ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ :**

1. ಸರ್ಕಾರದ ಪ್ರಧಾನ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ನಿರ್ದೇಶಕರು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

**Annexure-2**

# UTILISATION CERTIFICATE OF RAJEEV GANDHI PANCHAYATI SASHKTIKARAN ABHIYAN

**Activity Name:** DPRC Buildings

**YEAR-2013-14**

| | | | | | |
|---|---|---|---|---|---|
| District Panchayat | | | | | Closing Balance details |
| District Panchayat | | | | | |
| (a) Grants received During the year | | | | | |
| Sl. No. | Letter No. & Date | Central Govt. | State Govt. | Amount Rs. In Thousands | |
| 1 | | | | | |
| 2 | | | | | |
| (b) Total Fund Available | | | | | |

2. Certified that I have satisfied myself that the condition on which Grant-in Aid was sanctioned have been duly fulfilled and that I have exercised that following checks to see that the money has been actually utilized for the purpose for it was sanctioned.

**Managing Director**
**KRIDL, Bangalore**

# DPRC Buildings-Progress Report

| | Funds Sanctioned | Physical Progress | Funds Spent |
|---|---|---|---|
| DPRC Building 1 | | | |
| DPRC 2 | | | |
| DPRC 3 | | | |
| DPRC 4 | | | |
| DPRC 5 | | | |
| DPRC 6 | | | |
| DPRC 7 | | | |
| DPRC 8 | | | |
| DPRC 9 | | | |
| DPRC 10 | | | |
| DPRC 11 | | | |
| DPRC 12 | | | |